**OS No.184/2021**
**PW.2**

**<u>ದಿನಾಂಕಃ 23.01.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.</u>**

**<u>ಪಾಟೀ ಸವಾಲುಃ</u> ಪ್ರತಿವಾದಿ ಪರ ವಕೀಲರಿಂದ**

ವಾದಿಯು ನಮ್ಮ ಸಂಬಂಧಿಕರಲ್ಲ. ವಾದಿಯು ಏನು ಪರಿಹಾರ ಕೋರಿ ದಾವೆಯನ್ನು ಹೂಡಿರುತ್ತಾರೆ ಎಂದು ಗೊತ್ತಿಲ್ಲ. ದಾವಾಸ್ವತ್ತಿನ ಖಾತಾ ಮತ್ತು ದಾವಾಸ್ವತ್ತಿನ ಚೆಕ್ಕುಬಂಧಿ ಗೊತ್ತಿಲ್ಲ. ದಾವಾಸ್ವತ್ತನ್ನು ವಾದಿಯು ನಾಗಮ್ಮರವರ ಕಡೆಯಿಂದ ಖರೀದಿಸಿರುತ್ತೇನೆ. ದಾವಾಸ್ವತ್ತಿನ ದಾಖಲೆಗಳನ್ನು ನಾನು ನೋಡಿರುವುದಿಲ್ಲ. ಕ್ರಯಪತ್ರಕ್ಕೆ ನಾನು ಸಾಕ್ಷಿದಾರರನಾಗಿರುವುದಿಲ್ಲ. ನಾಗಮ್ಮರವರಿಗೆ ಸ್ವತ್ತು ಹೇಗೆ ಬಂದಿತು ಎಂದು ದಾಖಲೆಗಳನ್ನು ನಾನು ನೋಡಿರುವುದಿಲ್ಲ. ವಾದಿಯವರು ಖರೀದಿಸಿದ ದಾವಾ ಆಸ್ತಿಯ ಮೇಲೆ ಮಾನ್ಯ ಉಚ್ಛ ನ್ಯಾಯಾಲಯದಲ್ಲಿ ಒಂದು ಪ್ರಕರಣ ಹಾಗೂ ದಿವಾನಿ ನ್ಯಾಯಾಲಯದಲ್ಲಿ ಒಂದು ಪ್ರಕರಣ ಚಾಲ್ತಿಯಲ್ಲಿರುತ್ತದೆ ಎಂದರೆ ಗೊತ್ತಿಲ್ಲ. ವಾದಿಯು ಯಾರ ವಿರುದ್ಧ ದಾವೆಯನ್ನು ಹೂಡಿರುತ್ತಾರೆ ಎಂದು ಗೊತ್ತಿಲ್ಲ. ದಾವೆಯನ್ನು 1 ನೇ ಪ್ರತಿವಾದಿಯ ವಿರುದ್ಧ ಹೂಡಿರುತ್ತಾರೆ ಎಂದರೆ ಗೊತ್ತಿಲ್ಲ. 1 ನೇ ಪ್ರತಿವಾದಿಯು ನಾಗಮ್ಮರವರ ಸೊಸೆಯಾಗಬೇಕೆಂದರೆ ಗೊತ್ತಿಲ್ಲ. ಅವರಿಬ್ಬರ ನಡುವೆ ವಿಭಾಗಕ್ಕಾಗಿ ಪ್ರಸ್ತುತ ದಾವಾಸ್ವತ್ತಿನ ಮೇಲೆಯೂ ಪ್ರಕರಣ ಬಾಕಿ ಇರುತ್ತದೆ ಎಂದರೆ ಗೊತ್ತಿಲ್ಲ. ದಾವಾಸ್ವತ್ತನ್ನು ನೋಡಿರುತ್ತೇನೆ. ದಾವಾಸ್ವತ್ತಿನಲ್ಲಿ ಒಂದು ಸೈಕಲ್ ಅಂಗಡಿ ಇಟ್ಟಿರುತ್ತಾರೆ. ವಾದಿಯು ದಾವಾಸ್ವತ್ತಿನ ಸ್ವಾಧೀನದಲ್ಲಿರುತ್ತಾರೆ. ದಾವಾಸ್ವತ್ತು ಖಾಲಿ ಇದ್ದು, ಅದರಲ್ಲಿ ವಾದಿಯು ಸ್ವಾಧೀನದಲ್ಲಿಲ್ಲ ಎಂದರೆ ಸರಿಯಲ್ಲ. ನಾಗಮ್ಮರವರನ್ನು ನೋಡಿರುತ್ತೇನೆ. 1 ನೇ ಪ್ರತಿವಾದಿಯು ಸ್ವಾಧೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿರುವ ಮಾಹಿತಿ ನನಗೆ ಗೊತ್ತಿಲ್ಲ. ವಾದಿ ಮಾತು ಕೇಳಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u> ಇಲ್ಲ.**

**(ನನ್ನ ಉಕ್ತಲೇಖನ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸರಿ ಇದೆ**

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,**
**ದೊಡ್ಡಬಳ್ಳಾಪುರ.**